ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)
ಹನ್ನೊಂದನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 23ನೇ ಡಿಸೆಂಬರ್, 2021
(ಸಮಯ: ಬೆಳಿಗ್ಗೆ 10.00 ಗಂಟೆಗೆ)

----

1. ಶಾಸನ ರಚನೆ

ವಿಧೇಯಕವನ್ನು ಪರ್ಯಾಲೋಚಿಸುವುದು ಮತ್ತು ಅಂಗೀಕರಿಸುವುದು

ಶ್ರೀ ಆರಗ ಜ್ಞಾನೇಂದ್ರ (ಮಾನ್ಯ ಗೃಹ ಸಚಿವರು) ಅವರು:-

ಅ) 2021ನೇ ಸಾಲಿನ ಕರ್ನಾಟಕ ಧಾರ್ಮಿಕ ಸ್ವಾತಂತ್ರ್ಯ ಹಕ್ಕು ಸಂರಕ್ಷಣಾ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

2. ವಿತ್ತೀಯ ಕಾರ್ಯಕಲಾಪಗಳು

2021-22ನೇ ಸಾಲಿನ ಪೂರಕ ಅಂದಾಜುಗಳ ಎರಡನೇ ಕಂತಿನ ಬೇಡಿಕೆಗಳ ಮೇಲೆ ಚರ್ಚೆ, ಸರ್ಕಾರದ ಉತ್ತರ ಹಾಗೂ ಮತಕ್ಕೆ ಹಾಕುವುದು.

3. ನಿಯಮ 69ರ ಮೇರೆಗೆ ಸಾರ್ವಜನಿಕ ಮಹತ್ವದ ಜರೂರು ವಿಷಯಗಳ ಬಗ್ಗೆ ಅಲ್ಪ ಕಾಲಾವಧಿ ಚರ್ಚೆ

1) **ಶ್ರೀಯುತರುಗಳಾದ ಸಿದ್ದರಾಮಯ್ಯ, ಎಂ.ಬಿ. ಪಾಟೀಲ್, ಕೃಷ್ಣ ಬೈರೇಗೌಡ, ಈಶ್ವರ್ ಖಂಡ್ರೆ, ಮಹಾಂತೇಶ್ ಕೌಜಲಗಿ ಹಾಗೂ ಇತರರು** – ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ಕೃಷ್ಣಾ ಮೇಲ್ದಂಡೆ, ಮಹಾದಾಯಿ ತಿರುವು, ಕಾರಂಜಾ ಯೋಜನೆ ಮತ್ತು ಸಿಂಗಟಾಲೂರು ಏತ ನೀರಾವರಿ ಯೋಜನೆಗಳನ್ನು ಆದ್ಯತೆಯ ಮೇಲೆ ಅನುಷ್ಠಾನಗೊಳಿಸುವ ಬಗ್ಗೆ

ಹಾಗೂ

ಶ್ರೀಯುತರುಗಳಾದ ಎ.ಎಸ್. ಪಾಟೀಲ್ (ನಡಹಳ್ಳಿ), ಪಿ. ರಾಜೀವ್, ದೊಡ್ಡಗೌಡರ ಮಹಾಂತೇಶ್ ಬಸವಂತರಾಯ್, ಸಿದ್ದು ಸವದಿ, ಮಹದೇವಪ್ಪ ಶಿವಲಿಂಗಪ್ಪ ಯಾದವಾಡ ಹಾಗೂ ಇತರರು – ಕರ್ನಾಟಕ ಏಕೀಕರಣದ ನಂತರ ಕರ್ನಾಟಕ/ಉತ್ತರ ಕರ್ನಾಟಕ ಭಾಗದಲ್ಲಿ ಅಭಿವೃದ್ಧಿಯ ವ್ಯತ್ಯಾಸ/ ತಾರತಮ್ಯ ಆಗಿರುವ ಬಗ್ಗೆ ಹಾಗೂ ಅದಕ್ಕೆ ಪರಿಹಾರವನ್ನು ಕಂಡುಹಿಡಿಯುವ ಅಗತ್ಯತೆ ಕುರಿತಂತೆ

ಹಾಗೂ

... 2/ ..

ಶ್ರೀಯುತರುಗಳಾದ ಹೆಚ್.ಡಿ. ಕುಮಾರಸ್ವಾಮಿ, ಬಂಡೆಪ್ಪ ಖಾಶೆಂಪೂರ, ಡಿ.ಸಿ. ತಮ್ಮಣ್ಣ, ಹೆಚ್.ಕೆ. ಕುಮಾರಸ್ವಾಮಿ, ಹೆಚ್.ಡಿ. ರೇವಣ್ಣ ಹಾಗೂ ಇತರರು – ರಾಜ್ಯದಲ್ಲಿ ನೆನೆಗುದಿಗೆ ಬಿದ್ದಿರುವ ಕೃಷ್ಣಾ ಮೇಲ್ದಂಡೆ, ಮಹಾದಾಯಿ ಹಾಗೂ ಮೇಕೆದಾಟು ಯೋಜನೆಗಳ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಗಳ ಮೇಲೆ ಮುಂದುವರೆದ ಚರ್ಚೆ ಹಾಗೂ ಸರ್ಕಾರದ ಉತ್ತರ.

2) **ಶ್ರೀಯುತರುಗಳಾದ ಎ.ಟಿ. ರಾಮಸ್ವಾಮಿ, ಕೆ.ಎಂ. ಶಿವಲಿಂಗೇಗೌಡ, ಕೆ. ಶ್ರೀನಿವಾಸಗೌಡ, ಕೆ.ಎಸ್. ಲಿಂಗೇಶ್, ಡಾ. ಕೆ. ಅನ್ನದಾನಿ ಹಾಗೂ ಇತರರು** – ಕರ್ನಾಟಕ ರಾಜ್ಯದಲ್ಲಿ ಲಕ್ಷಾಂತರ ಕೋಟಿ ರೂಪಾಯಿಗಳ ಸರ್ಕಾರದ ಸಂಪತ್ತನ್ನು ಲೂಟಿ ಮಾಡುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

3) **ಶ್ರೀಯುತರುಗಳಾದ ಸಿದ್ದರಾಮಯ್ಯ, ಡಿ.ಕೆ. ಶಿವಕುಮಾರ್, ಕೆ.ಆರ್. ರಮೇಶ್ ಕುಮಾರ್, ಹೆಚ್.ಕೆ. ಪಾಟೀಲ್, ಡಾ. ಜಿ. ಪರಮೇಶ್ವರ್, ಕೃಷ್ಣ ಬೈರೇಗೌಡ ಡಾ. ಅಜಯ್ ಧರ್ಮಸಿಂಗ್ ಹಾಗೂ ಇತರರು** – ಕೋವೀಡ್ ಸಂದರ್ಭದಲ್ಲಿ ರಾಜ್ಯದಲ್ಲಿ ಜಾರಿಗೆ ತಂದಿರುವ ಎ.ಪಿ.ಎಂ.ಸಿ. ಕಾಯ್ದೆ, ಭೂ ಸುಧಾರಣಾ ಕಾಯ್ದೆ ಮತ್ತು ಜಾನುವಾರು ಹತ್ಯಾ ನಿಷೇಧ ಕಾಯ್ದೆಗಳನ್ನು ಹಿಂಪಡೆಯಬೇಕೆಂದು ರೈತರು ಪ್ರತಿಭಟಿಸುತ್ತಿರುವ ಬಗ್ಗೆ ಪ್ರಸ್ತಾಪಿಸಲು ನೀಡಿರುವ ಸೂಚನೆಯ ಮೇಲೆ ಚರ್ಚೆ.

4. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು	:	ಒಂಭತ್ತನೇ ಪಟ್ಟಿ
ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು	:	ಒಂಭತ್ತನೇ ಪಟ್ಟಿ

5. ಗಮನ ಸೆಳೆಯುವ ಸೂಚನೆಗಳು

1) **ಡಾ. ಕೆ. ಶ್ರೀನಿವಾಸಮೂರ್ತಿ ಅವರು** – ನೆಲಮಂಗಲ ವಿಧಾನಸಭಾ ಕ್ಷೇತ್ರದ ದಾಬಸ್‌ಪೇಟೆ ಠಾಣೆ ವ್ಯಾಪ್ತಿಯಲ್ಲಿ ನಡೆದ ಅಪಘಾತವನ್ನು ಸರಿಯಾಗಿ ವಿಚಾರಣೆ ಮಾಡದೆ ಕಾರು ಚಾಲಕ ಮತ್ತು ಮಾಲೀಕರ ವಿರುದ್ಧ ಅಲ್ಲಿನ ಸಬ್ ಇನ್ಸ್‌ಪೆಕ್ಟರ್‌ರವರು ಸುಳ್ಳು ದೂರು ದಾಖಲಿಸಿ ಜೈಲಿಗೆ ಕಳುಹಿಸಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

2) **ಶ್ರೀಯುತರುಗಳಾದ ಕೆ. ರಘುಪತಿ ಭಟ್, ದಿನಕರ್ ಕೇಶವ ಶೆಟ್ಟಿ, ಡಿ. ವೇದವ್ಯಾಸ ಕಾಮತ್, ಡಾ. ಭರತ್‌ಶೆಟ್ಟಿ ವೈ., ಸುನಿಲ್ ಬಿಳಿಯಾ ನಾಯಕ್ ಹಾಗೂ ಇತರರು** – ಉಡುಪಿ, ಕೊಡಗು, ದಕ್ಷಿಣ ಕನ್ನಡ ಮತ್ತು ಉತ್ತರ ಕನ್ನಡ ಜಿಲ್ಲೆಗಳಲ್ಲಿ ಮೂರು ಗುಂಟೆಗಿಂತ ಕಡಿಮೆ ವಿಸ್ತೀರ್ಣ ಹೊಂದಿರುವ ಸರ್ವೆ ನಂಬರ್‌ಗಳನ್ನು ಸೃಜಿಸುವುದನ್ನು ತಡೆಹಿಡಿದು ಈ ವಿಸ್ತೀರ್ಣಕ್ಕೆ 11 E ನಕ್ಷೆಗಳನ್ನು ತಯಾರಿಸುವಂತಿಲ್ಲ ಹಾಗೂ ವಿತರಿಸುವಂತಿಲ್ಲ ಎಂದು ಹೊರಡಿಸಲಾಗಿರುವ ಆದೇಶದಲ್ಲಿನ ನಿಯಮವನ್ನು ಸಡಿಲಿಸಿ/ಮಾರ್ಪಡಿಸಿ ಆರ್ಥಿಕವಾಗಿ ಹಿಂದುಳಿದವರು ಮತ್ತು ಸಾಮಾನ್ಯ ವರ್ಗದವರು ವಾಸ್ತವ್ಯದ ಮನೆಗಳನ್ನು ನಿರ್ಮಿಸಲು ಅವಕಾಶ ಕಲ್ಪಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

... 3/ ..

3) **ಶ್ರೀ ಎಂ.ವಿ. ವೀರಭದ್ರಯ್ಯ ಅವರು** – ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಕೆಂಪೇಗೌಡ ಬಡಾವಣೆ ನಿರ್ಮಾಣಕ್ಕಾಗಿ ಭೂ ಸ್ವಾಧೀನಪಡಿಸಿಕೊಂಡಿದ್ದ ಜಮೀನನ್ನು ಯೋಜನಾ ನಕ್ಷೆಯ ರೀತ್ಯಾ ಯಾವ ಯಾವ ಉದ್ದೇಶಕ್ಕಾಗಿ ಭೂಸ್ವಾಧೀನ ಪಡಿಸಿಕೊಳ್ಳಲಾಗಿದೆಯೋ ಅದನ್ನು ಮರೆಮಾಚಿ ಪ್ರಾಧಿಕಾರದ ಅಧಿಕಾರಿಗಳು ನಿವೇಶನಗಳನ್ನು ರಚಿಸಿ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿಗಳನ್ನು ನಷ್ಟವುಂಟು ಮಾಡಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

4) **ಶ್ರೀಯುತರುಗಳಾದ ಟಿ. ರಘುಮೂರ್ತಿ, ಸತೀಶ್ ಲ. ಜಾರಕಿಹೊಳಿ, ಬಸನಗೌಡ ದದ್ದಲ, ಅನಿಲ್ ಕುಮಾರ್ ಸಿ. ಹಾಗೂ ಇತರರು** – ಪರಿಶಿಷ್ಟ ಪಂಗಡದ ಜನಾಂಗದವರಿಗೆ ಶಿಕ್ಷಣ ಮತ್ತು ಉದ್ಯೋಗಾವಕಾಶಕ್ಕೆ ಸಂಬಂಧಿಸಿದಂತೆ ಮೀಸಲಾತಿಯನ್ನು 3% ಯಿಂದ 7.5%ಗೆ ಹೆಚ್ಚಿಸುವ ಸಲುವಾಗಿ ರಚಿಸಿದಂತಹ ನಿವೃತ್ತ ನ್ಯಾಯಮೂರ್ತಿ ನಾಗಮೋಹನದಾಸ್ ಸಮಿತಿ ಅಂತಿಮ ವರದಿಯನ್ನು ಸಲ್ಲಿಸಿದ್ದರೂ ಈ ಬಗ್ಗೆ ವಿಳಂಬ ಧೋರಣೆ ಅನುಸರಿಸುತ್ತಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

5) **ಶ್ರೀ ತನ್ವೀರ್ ಸೇಠ್ ಅವರು** – ಮೈಸೂರು ನಗರ ನರಸಿಂಹರಾಜ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಜ್ಯೋತಿನಗರ ಬಡಾವಣೆಯಲ್ಲಿ ನಿರ್ಮಿಸಿರುವ ಶ್ರೀ ಚಾಮುಂಡೇಶ್ವರಿ ಮತ್ತು ಮಾರಿಯಮ್ಮ ದೇವಸ್ಥಾನವನ್ನು ಅಕ್ರಮವಾಗಿ ಪೊಲೀಸ್ ಇಲಾಖೆಗೆ ಸೇರಿದ ಜಮೀನಿನಲ್ಲಿ ನಿರ್ಮಿಸಲಾಗಿದೆ ಎಂದು ದೇವಸ್ಥಾನದ ಬಾಗಿಲಿಗೆ ಬೀಗ ಹಾಕಿ ಸಾರ್ವಜನಿಕರ ಪ್ರವೇಶವನ್ನು ನಿಷೇಧಿಸಿ ದೈನಂದಿನ ಪೂಜಾ ಕಾರ್ಯಗಳಿಗೆ ಅಡ್ಡಿಯನ್ನುಂಟು ಮಾಡಿರುವ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

6) **ಶ್ರೀ ರಿಜ್ವಾನ್ ಅರ್ಷದ್ ಅವರು** – ಬೆಂಗಳೂರಿನ ವರ್ತೂರು ಪೊಲೀಸ್ ಠಾಣೆಯ ಅಧಿಕಾರಿ ಮತ್ತು ಸಿಬ್ಬಂದಿಗಳ ದೌರ್ಜನ್ಯದಿಂದ ಒಬ್ಬ ಯುವಕ ಕೈ ಕಳೆದುಕೊಂಡ ಅಮಾನವೀಯ ಘಟನೆಯ ಬಗ್ಗೆ ಮಾನ್ಯ ಗೃಹ ಸಚಿವರ ಗಮನ ಸೆಳೆಯುವುದು.

7) **ಶ್ರೀ ಡಿ. ವೇದವ್ಯಾಸ ಕಾಮತ್ ಅವರು** – ಮಂಗಳೂರು ನಗರಪಾಲಿಕೆಯ ವ್ಯಾಪ್ತಿಯಲ್ಲಿ ಕೃಷಿ ಹಾಗೂ ಕೃಷಿಯೇತರ ಭೂಮಿಯ ಮೌಲ್ಯದ ಮೇಲೆ ಮುದ್ರಾಂಕ ಶುಲ್ಕ ನೀಡಬೇಕಾಗಿದ್ದು ಕೃಷಿ ಭೂಮಿಯಾಗಿದ್ದರೂ ಮಾರಾಟಗಾರರು ಕೃಷಿಯೇತರ ಭೂಮಿಯ ಮೌಲ್ಯದ ಮೇಲೆ ಆದಾಯ ತೆರಿಗೆ ನೀಡಬೇಕಾಗಿರುವುದರಿಂದ ಮಂಗಳೂರು ನಗರದಲ್ಲಿ ಯಾವುದೇ ಕೃಷಿ ಭೂಮಿ ಮಾರಾಟವಾಗದೇ ಕೃಷಿಕರಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

8) **ಶ್ರೀ ಹೆಚ್.ಡಿ. ರೇವಣ್ಣ ಅವರು** – ಹಾಸನ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಹಣ ಭರವಸೆ ಪತ್ರ ಬಾಕಿಯಿರುವುದರಿಂದ ಗುತ್ತಿಗೆದಾರರಿಗೆ ತೊಂದರೆಯಾಗಿ ಸಣ್ಣ ನೀರಾವರಿ ಇಲಾಖೆಯ ವ್ಯಾಪ್ತಿಯಲ್ಲಿ ಅಭಿವೃದ್ಧಿ ಕಾರ್ಯಕ್ರಮಗಳು ಕುಂಠಿತವಾಗಿರುವುದರಿಂದ ಬಾಕಿಯಿರುವ ಹಣ ಭರವಸೆಯ ಪತ್ರವನ್ನು ಬಿಡುಗಡೆಗೊಳಿಸುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

9) **ಶ್ರೀ ಸಿ.ಎಸ್. ನಿರಂಜನ್ ಕುಮಾರ್ ಅವರು** – ಗುಂಡ್ಲುಪೇಟೆ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಗುಂಡ್ಲು ನದಿಯ ಪುನಶ್ಚೇತನಕ್ಕಾಗಿ ನೂರು ಕೆರೆಗಳಿಗೆ ನೀರು ಪೂರೈಸುವ ಯೋಜನೆಗೆ ಮಂಜೂರಾತಿ ನೀಡಿ, ವಿಶೇಷ ಅನುದಾನವನ್ನು ಬಿಡುಗಡೆ ಮಾಡುವ ಬಗ್ಗೆ ಮಾನ್ಯ ಸಣ್ಣ ನೀರಾವರಿ ಹಾಗೂ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರ ಗಮನ ಸೆಳೆಯುವುದು.

... 4/ ..

10) **ಶ್ರೀ ಎಸ್.ಎನ್. ಸುಬ್ಬಾರೆಡ್ಡಿ ಅವರು** – ಬಾಗೇಪಲ್ಲಿ ತಾಲ್ಲೂಕು ಕಸಬಾ ಹೋಬಳಿಯಲ್ಲಿ ನಕಲಿ ದಾಖಲೆಗಳನ್ನು ಸೃಷ್ಟಿಸಿ ಭೂಕಬಳಿಕೆ ಮಾಡಿರುವ ಸರ್ಕಾರಿ ಜಮೀನುಗಳನ್ನು ಸರ್ಕಾರದ ವಶಕ್ಕೆ ಪಡೆಯಲು ಹಾಗೂ ಈ ಜಮೀನುಗಳಲ್ಲಿ ನಿರ್ಮಾಣ ಮಾಡಿರುವ ಕಟ್ಟಡಗಳನ್ನು ತೆರವುಗೊಳಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

11) **ಶ್ರೀ ಶರಣು ಸಲಗರ ಅವರು** – ಬಸವಕಲ್ಯಾಣ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿನ ಬಸವಕಲ್ಯಾಣ ನಗರದಲ್ಲಿ ಛತ್ರಪತಿ ಶಿವಾಜಿ ಮಹಾರಾಜರ ಪಾರ್ಕ್ ನಿರ್ಮಾಣ ಕಾಮಗಾರಿಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

12) **ಶ್ರೀ ಆರ್. ಮಂಜುನಾಥ್ ಅವರು** – ಬೆಂಗಳೂರು ನಗರ ವ್ಯಾಪ್ತಿಯಲ್ಲಿ ಸ್ಥಗಿತಗೊಂಡಿರುವ ಎಲ್.ಇ.ಡಿ. ಬೀದಿ ದೀಪಗಳ ಅಳವಡಿಕೆ ಯೋಜನೆಯ ಕಾಮಗಾರಿಯನ್ನು ಕೈಗೆತ್ತಿಕೊಳ್ಳುವ ಬಗ್ಗೆ ಹಾಗೂ ಅದರ ನಿರ್ವಹಣೆಯನ್ನು ಪರ್ಯಾಯ ಯೋಜನೆಯಲ್ಲಿ ಅನುಷ್ಠಾನಕ್ಕೆ ತರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

13) **ಶ್ರೀ ಬಂಡೆಪ್ಪ ಖಾಶೆಂಪೂರ ಅವರು** – ಬೀದರ್ ಜಿಲ್ಲೆಯ ಚಿಟಗುಪ್ಪ ತಾಲ್ಲೂಕಿನ ಬೇಮಳಖೇಡ ಜಿಲ್ಲಾ ಪಂಚಾಯಿತಿಯ ಮನ್ನಾಎಖೇಳ್ಳಿ ಮತ್ತು ಸುತ್ತಮುತ್ತಲಿನ ಗ್ರಾಮಗಳಲ್ಲಿ ವಾಸಿಸುತ್ತಿರುವ ಗ್ರಾಮಸ್ಥರು ಸರ್ಕಾರಿ ಸೌಲಭ್ಯಗಳನ್ನು ಪಡೆಯಲು ಅನುಕೂಲವಾಗುವಂತೆ ಮನ್ನಾಎಖೇಳ್ಳಿ ಗ್ರಾಮದಲ್ಲಿ ಅಟಲ್‌ಜೀ ಜನಸ್ನೇಹಿ ಕೇಂದ್ರದ ಕಛೇರಿಯನ್ನು ಪ್ರಾರಂಭಿಸುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

14) **ಶ್ರೀ ಸಿ. ಪುಟ್ಟರಂಗ ಶೆಟ್ಟಿ ಅವರು** – ಗ್ರಾಮಾಂತರ ಪ್ರದೇಶದ ಹಳ್ಳಿಗಳ ಬಡ ಕುಟುಂಬದ ಮನೆಗಳಿಗೆ ಅಳವಡಿಸಿರುವ ಭಾಗ್ಯಜ್ಯೋತಿ ವಿದ್ಯುತ್ ಬಿಲ್ಲನ್ನು ವಸೂಲಿ ಮಾಡಲು ವಿದ್ಯುತ್ ಸಂಪರ್ಕವನ್ನು ಕಡಿತಗೊಳಿಸಿರುವುದರಿಂದ ಬಡಜನರು ತೊಂದರೆಗೆ ಒಳಗಾಗಿರುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

15) **ಶ್ರೀ ಮಂಜುನಾಥ್ ಎ. ಅವರು** – ಬೆಂಗಳೂರು ನಗರದ ಸುಮನಹಳ್ಳಿ ರಸ್ತೆಯಿಂದ ಮಾಗಡಿಯವರೆಗೆ ರಸ್ತೆಯು ಸಂಪೂರ್ಣ ಹಾಳಾಗಿರುವುದರಿಂದ ವಾಹನ ಸವಾರರು ಹಾಗೂ ರೈತರುಗಳಿಗೆ ತೊಂದರೆಯಾಗಿರುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

16) **ಶ್ರೀಮತಿ ಕೆ. ಪೂರ್ಣಿಮ ಅವರು** – ಸಗಟು ಉಕ್ಕು ಮಾರುಕಟ್ಟೆ ಸ್ಥಳಾಂತರ ಯೋಜನೆಗೆ ಜಮೀನು ನೀಡಿದ ಭೂಮಾಲೀಕರಿಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ವಿಶೇಷ ಪ್ರೋತ್ಸಾಹಧನ ಯೋಜನೆಯಡಿಯಲ್ಲಿ ನಿವೇಶನಗಳನ್ನು ನೀಡುವ ಬಗ್ಗೆ ಮಾನ್ಯ ಮುಖ್ಯಮಂತ್ರಿಯವರ ಗಮನ ಸೆಳೆಯುವುದು.

17) **ಶ್ರೀ ಎನ್. ಮಹೇಶ್ ಅವರು** – ಚಾಮರಾಜ ತಾಲ್ಲೂಕಿನ ವಿವಿಧ ಶೈಕ್ಷಣಿಕ ಬ್ಲಾಕ್‌ನ ಆಡಳಿತ ಹಾಗೂ ಉಸ್ತುವಾರಿ ಸುಗಮವಾಗಿ ಆಗಬೇಕಾಗಿರುವುದರಿಂದ ಕೊಳ್ಳೇಗಾಲ ವಿಧಾನಸಭಾ ಕ್ಷೇತ್ರಕ್ಕೆ ಸೇರಿರುವ ಚಾಮರಾಜನಗರ ತಾಲ್ಲೂಕಿನ ಸಂತೆಮರಳ್ಳಿ ಹೋಬಳಿಯನ್ನು ಶೈಕ್ಷಣಿಕವಾಗಿ ಯಳಂದೂರು ತಾಲ್ಲೂಕಿಗೆ ಸೇರಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

...5/ ..

18) **ಶ್ರೀ ಶ್ರೀನಿವಾಸ ಮಾನೆ ಅವರು** – ಕೋವಿಡ್-19ರ ನಿರ್ವಹಣೆಗಾಗಿ ಏಪ್ರಿಲ್ 2020 ರಿಂದ ಡಿಸೆಂಬರ್ 2020 ರವರೆಗೆ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಯ ಅಡಿಯಲ್ಲಿ ಕರ್ತವ್ಯ ನಿರ್ವಹಿಸಿದ ನೌಕರರು ಹಾಗೂ ಎನ್.ಪಿ.ಎಸ್. ಅಡಿಯಲ್ಲಿ ನಿವೃತ್ತ ನೌಕರರಿಗೆ ಪಿಂಚಣಿ ಇತ್ಯಾದಿಗಳನ್ನು ಪಾವತಿ ಮಾಡುವ ಬಗ್ಗೆ ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಗಮನ ಸೆಳೆಯುವುದು.

19) **ಶ್ರೀ ಬಳ್ಳಾರಿ ವಿರೂಪಾಕ್ಷಪ್ಪ ರುದ್ರಪ್ಪ ಅವರು** – ಅಗ್ರಿ ಗೋಲ್ಡ್ ಕಂಪನಿಯ ರಾಜ್ಯದ ಗ್ರಾಹಕರಿಗೆ ವಂಚನೆ ಎಸಗಿರುವುದರಿಂದ ಆತ್ಮಹತ್ಯೆಗೆ ಶರಣಾದ ಹಿಂದುಳಿದ ಮತ್ತು ಕೂಲಿ ಕಾರ್ಮಿಕರ ಕುಟುಂಬದವರ ಸಾವಿಗೆ ನ್ಯಾಯ ಒದಗಿಸುವ ಸಲುವಾಗಿ ಇತರೆ ರಾಜ್ಯಗಳಲ್ಲಿ ಗ್ರಾಹಕರ ಠೇವಣಿ ಮೊತ್ತವನ್ನು ಹಿಂದಿರುಗಿಸಲು ಕ್ರಮ ತೆಗೆದುಕೊಂಡ ರೀತಿಯಲ್ಲಿಯೇ ಕಠಿಣ ಕ್ರಮಗಳನ್ನು ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

20) **ಶ್ರೀ ಹೆಚ್. ಹಾಲಪ್ಪ ಅವರು** – ನಗರ ಯೋಜನಾ ಪ್ರಾಧಿಕಾರದಿಂದ ಅನುಮೋದನೆ ಪಡೆಯದೇ ಇರುವ ತಹಶೀಲ್ದಾರ್ ಭೂಪರಿವರ್ತನೆಯಾದ ನಿವೇಶನಗಳನ್ನು ಖಾತಾ ಮತ್ತು ನೋಂದಣಿಯಾಗದಿರುವುದರಿಂದ ಉಂಟಾಗಿರುವ ತೊಂದರೆಗಳ ಬಗ್ಗೆ ಮಾನ್ಯ ಪೌರಾಡಳಿತ, ಸಣ್ಣ ಕೈಗಾರಿಕೆಗಳು ಹಾಗೂ ಸಾರ್ವಜನಿಕ ವಲಯ ಉದ್ಯಮಗಳ ಸಚಿವರ ಗಮನ ಸೆಳೆಯುವುದು.

6. ಅರ್ಧ ಗಂಟೆ ಕಾಲಾವಧಿ ಚರ್ಚೆ

ಶ್ರೀ ರವೀಂದ್ರ ಶ್ರೀಕಂಠಯ್ಯ ಇವರು – ಶ್ರೀರಂಗಪಟ್ಟಣ ಕ್ಷೇತ್ರ ವ್ಯಾಪ್ತಿಯಲ್ಲಿ ಜಮೀನುಗಳ ಸರ್ವೇ, ಪೋಡಿ, ನಕಾಶೆಗಳು ದೊರಕದೇ ಸಂಕಷ್ಟಕ್ಕೆ ಒಳಗಾಗಿರುವ ರೈತರುಗಳಿಗೆ ಅನುಕೂಲ ಮಾಡಿಕೊಡುವ ಬಗ್ಗೆ ದಿನಾಂಕ:13.12.2021ರ ಗಮನ ಸೆಳೆಯುವ ಸೂಚನೆಗೆ ಒದಗಿಸಿರುವ ಉತ್ತರಕ್ಕೆ ಸಂಬಂಧಿಸಿದಂತೆ ಅರ್ಧ ಗಂಟೆ ಕಾಲ ಚರ್ಚಿಸುವುದು.

ಎಂ.ಕೆ. ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.
http://kla.kar.nic.in/assembly/lob/lob.htm